**ದಿನಾಂಕ: 06.07.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

**: ಚರ್ಚೆಯಾದ ವಿಷಯಗಳು :**

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**: ಸಭೆಗೆ ಹಾಜರಾಗಿದ್ದವರ ವಿವರಗಳು :**

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 177ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ಬೆಸ್ಕಾಂ ಅಧಿಕಾರಿಗಳು |
| ಸದಸ್ಯರುಗಳು | ತೋಟಗಾರಿಕೆ ಅಧಿಕಾರಿ (Horti. Inspector) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |

**:ನಡಾವಳಿಯ ವರದಿ:**

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 1ನೇ ಮುಖ್ಯರಸ್ತೆ, ಜೆ.ಪಿ.ನಗರ 3ನೇ ಹಂತದಲ್ಲಿ ಕಸವನ್ನು ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- ಇತ್ತೀಚೆಗೆ ಮಳೆಗಾಲದವಿದ್ದು ಮ್ಯಾನ್‌ಹೋಲ್‌ಗಳಲ್ಲಿನ ನೀರು ಉಕ್ಕಿ ರಸ್ತೆಬದಿಯಲ್ಲಿ ಹರಿಯುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುವುದರಿಂದ ಸಂಬಂಧಪಟ್ಟ ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ಸೂಚಿಸುವಂತೆ ಚರ್ಚಿಸಲಾಯಿತು.

**ಪು.ತಿ.ನೋ**

- Road humps ಗಳಿಗೆ ಬಣ್ಣ ಬಳಿಯುವಂತೆ ಇಂಜಿನಿಯರ್‌ರವರಿಗೆ ತಿಳಿಸಲು ಸೂಚಿಸಿದರು.

- ಕೋವಿಡ್ ವ್ಯಾಕ್ಸಿನ್‌ಅನ್ನು ಹೆಚ್ಚಿನದಾಗಿ ವ್ಯವಸ್ಥೆಯನ್ನು ಕಲ್ಪಿಸುವಂತೆ ಚರ್ಚಿಸಲಾಯಿತು.

- ಇತ್ತೀಚಿನ ದಿನಗಳಲ್ಲಿ ಮಳೆ ಇರುವ ಕಾರಣ ಮರದ ರೆಂಬೆ-ಕೊಂಬೆಗಳನ್ನು ಕತ್ತರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಅರಣ್ಯ ಇಲಾಖೆರವರಿಗೆ ಸೂಚಿಸಿದರು

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

[signature]
**ಸದಸ್ಯ ಕಾರ್ಯದರ್ಶಿ**
**ಹಾಗೂ ಕಿರಿಯ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Napavg . 4
**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 177**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**